## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ
ಟಿ.ದಾಸರಹಳ್ಳಿ ಉಪ ವಿಭಾಗ, ದಾಸರಹಳ್ಳಿ ವಲಯ
ಮಾರಮ್ಮ ದೇವಸ್ಥಾನದ ಹತ್ತಿರ, ಬಾಗಲಗುಂಟೆ

ಸಂಖ್ಯೆ:ಬೃ.ಬೆಂ.ಮ.ಪಾ/ದಾ.ವ/ಸ.ಅ/ವಾ.14/ಪಿಆರ್: 05 :2020-21 ದಿನಾಂಕ: 19.12.2020

### ಬಾಗಲಗುಂಟೆ ವಾರ್ಡ್-14ರ ವಾರ್ಡ್ ಸಭೆಯ ನಡವಳಿ

ದಿ.19.12.2020 ರಂದು ಬೆಳಗ್ಗೆ 11.00 ಗಂಟೆಗೆ ಶ್ರೀ.ಕೆ.ಮರುಳಸಿದ್ದಪ್ಪ, ವಾರ್ಡ್ ಕಮಿಟಿ ನೋಡೆಲ್ ಆಫೀಸರ್ ರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

ಹಾಜರಿದ್ದವರು:

1. ಶ್ರೀ.ಚೇತನ್ ಕೆ.ಎಂ, ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು, ಬಾಗಲಗುಂಟೆ ವಾರ್ಡ್ ನಂ.14
2. ಶ್ರೀ.ಮೋಹನ್, ಹಿರಿಯ ಆರೋಗ್ಯ ಪರಿವೀಕ್ಷಕರು, ಬಾಗಲಗುಂಟೆ ಹಾಗೂ ವಾರ್ಡ್ ಸಮಿತಿ ಸದಸ್ಯರು
3. ಶ್ರೀ.ಕಮಲ್ ಗದ್ದಿಮನಿ, ಕಿರಿಯ ಆರೋಗ್ಯ ಪರಿವೀಕ್ಷಕರು, ಬಾಗಲಗುಂಟೆ ಹಾಗೂ ವಾರ್ಡ್ ಸಮಿತಿ ಸದಸ್ಯರು
4. ಶ್ರೀ.ಲೋಕೇಶ್ ಎಂ.ಎನ್, ಬಿ.ಡಬ್ಲ್ಯೂ.ಎಸ್.ಎಸ್.ಬಿ, ಬಾಗಲಗುಂಟೆ
5. ಶ್ರೀ.ಟಿ.ಗೋವಿಂದರಾಜು, ವಿದ್ಯುತ್ ವಿಭಾಗ, ಬಿಬಿಎಂಪಿ
6. ಶ್ರೀ.ಮೂಡಲಗಿರಿಯಪ್ಪ, ಅಧ್ಯಕ್ಷರು, ಸೌಂದರ್ಯ ನಗರ ಕ್ಷೇಮಾಭಿವೃದ್ದಿ ಸಂಘ
7. ಶ್ರೀ.ಬಿ.ಟಿ.ಗೋವಿಂದರಾಜು, ಒಕ್ಕಲಿಗರ ಕ್ಷೇಮಾಭಿವೃದ್ದಿ ಸಂಘ (ರಿ), ಟಿ.ದಾಸರಹಳ್ಳಿ
8. ಶ್ರೀ.ಲಕ್ಷ್ಮಿ ವೆಂಕಟೇಶ್, ಕದಂಬ ನಾಗರೀಕ ಹಿತ ರಕ್ಷಣಾ ಸಮಿತಿ, ಮುನಿಕೊಂಡಪ್ಪ ಬಡಾವಣೆ
9. ಶ್ರೀ.ಜಿ.ಆರ್.ವೇಣುಗೋಪಾಲ್, ಅನುಗ್ರಹ ಶನೇಶ್ವರ ದೇವಸ್ಥಾನ ಟ್ರಸ್ಟ್, ಮಂಜುನಾಥನಗರ
10. ಶ್ರೀ.ಗುರುಪ್ರಸಾದ್, ವಲಯಾಧ್ಯಕ್ಷರು, ಲಯನ್ ಸಂಸ್ಥೆ
11. ಶ್ರೀ.ವಿ.ರಾಮೇಗೌಡ, ಭುವನೇಶ್ವರಿನಗರ, ಬೆಂಗಳೂರು

ಶ್ರೀ.ಕೆ.ಮರುಳಸಿದ್ದಪ್ಪ, ನೋಡೆಲ್ ಅಧಿಕಾರಿ, ವಾರ್ಡ್ ನಂ.14, ಬಾಗಲಗುಂಟೆ ರವರು ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಭೆಯ ಸದಸ್ಯರು ಹಾಜರಿದ್ದ ಅಧಿಕಾರಿಗಳನ್ನು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ದಿ ಸಂಘದ ಪದಾಧಿಕಾರಿಗಳನ್ನು ಸ್ವಾಗತಿಸಿ ಡಿಸೆಂಬರ್ ತಿಂಗಳ ಮೂರನೇ ಶನಿವಾರದ ಸಭೆಯನ್ನು ಪ್ರಾರಂಭಿಸಿದರು.

**1. ಹಿಂದಿನ ಸಭೆಯಲ್ಲಿ ಚರ್ಚಿಸಲಾದ ವಿಷಯಗಳು ಹಾಗೂ ದೂರುಗಳಿಗೆ ಸಂಬಂಧಪಟ್ಟಂತೆ ತೆಗೆದುಕೊಂಡ ಕ್ರಮಗಳ ಬಗ್ಗೆ.**

ದಿ.05.12.2020 ರಂದು ನಡೆದ ವಾರ್ಡ್ ಕಮಿಟಿ ಸಭೆಯಲ್ಲಿ ಕದಂಬ ನಾಗರೀಕ ಹಿತರಕ್ಷಣಾ ಸಮಿತಿಯ ಶ್ರೀ.ಲಕ್ಷ್ಮಿ ವೆಂಕಟೇಶ್ ರವರು ವಾರ್ಡ್‌ನ ಮುನಿಕೊಂಡಪ್ಪ ಬಡಾವಣೆಯ ಮೋರಿಗಳಲ್ಲಿ ಹೂಳು ತುಂಬಿರುವ ಬಗ್ಗೆ ಸಭೆಯಲ್ಲಿ ಪ್ರಸ್ಥಾಪಿಸಿ ತುರ್ತಾಗಿ ಸದರಿ ಬಡಾವಣೆಗಳ ಮೋರಿಗಳಲ್ಲಿ ತುಂಬಿರುವ ಹೂಳನ್ನು ತೆಗೆಯುವ ಬಗ್ಗೆ ಕ್ರಮ ಕೈಗೊಳ್ಳಲು ಸೂಚಿಸಿದರು. ಅದರಂತೆ ವಾರ್ಡ್ ಅಭಿಯಂತರರು ಸದರಿ ಕಾಮಗಾರಿಯನ್ನು ಕೈಗೊಳ್ಳುವ ಸಂಬಂಧ ಸಿಲ್ಟ್ & ಟ್ರ್ಯಾಕ್ಟರ್ ಕಾಮಗಾರಿಯ ಟೆಂಡರ್ ಪ್ರಕ್ರಿಯೆ ಮುಕ್ತಾಯಗೊಂಡ ನಂತರ ಕಾಮಗಾರಿಯನ್ನು ಪ್ರಾರಂಭಿಸುವುದಾಗಿ ತಿಳಿಸಿದರು

ಶ್ರೀ.ಮೂಡಲಗಿರಿಯಪ್ಪ, ಸೌಂದರ್ಯನಗರ ಕ್ಷೇಮಾಭಿವೃದ್ದಿ ಸಂಘ ಸದಸ್ಯರು, 110 ಹಳ್ಳಿ ವ್ಯಾಪ್ತಿಯಲ್ಲಿ ಬರುವ ಸಿಡೇದಹಳ್ಳಿ ಗ್ರಾಮ ಪರಿಮಿತಿಯಲ್ಲಿ ಹಲವಾರು ಕೊಳವೆ ಬಾವಿಗಳು ದುರಸ್ಥಿಗೊಂಡಿರುವುದರಿಂದ ಸಾರ್ವಜನಿಕರಿಗೆ ಕುಡಿಯುವ ನೀರು ಸರಬರಾಜು ಮಾಡಲು ತೊಂದರೆಯಾಗಿರುವುದಾಗಿ ಸಭೆಯಲ್ಲಿ ತಿಳಿಸಿದರು. ಸದರಿ ವಿಷಯದ ಬಗ್ಗೆ ಸಹಾಯಕ ಅಭಿಯಂತರರು ಪ್ರತಿಕ್ರಿಯಿಸಿ ಕೊಳವೆ ಬಾವಿ ದುರಸ್ಥಿಗೊಳಿಸುವ ಕಾಮಗಾರಿಯ ಟೆಂಡರ್ ಪ್ರಕ್ರಿಯೆ ಮುಗಿದ ನಂತರ ಕ್ರಮ ಕೈಗೊಳ್ಳುವುದಾಗಿ ಸಭೆಯಲ್ಲಿ ತಿಳಿಸಿದರು.



Scanned with CamScanner

**2. ಕೋವಿಡ್–19 ಸೋಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ**

ವಾರ್ಡ್‌ನ ಆರೋಗ್ಯ ಪರಿವೀಕ್ಷಕರು ಕೋವಿಡ್–19 ಸಾಂಕ್ರಾಮಿಕ ರೋಗದ ಬಗ್ಗೆ ಚರ್ಚಿಸಿ ಪ್ರತೀ ದಿನ 02 ವೊಬೈ ಟೀಂ ನ ಮೂಲಕ ರೋಗ ಪತ್ತೆ ಕಾರ್ಯವನ್ನು ನಡೆಸಲಾಗುತ್ತಿರುತ್ತದೆ. ಬಾಗಲಗುಂಟೆ ವಾರ್ಡ್ ನಂ.14ರ ವ್ಯಾಪ್ತಿಯಲ್ಲಿ ಒಟ್ಟು ಫಾಸಿಟಿವ್ ಕೇಸ್ 2481, ಬಿಡುಗಡೆ 2108 ಹಾಗೂ ಒಟ್ಟು Active case ಪ್ರಕರಣಗಳು 336 ಇರುತ್ತದೆಂದು ಸಭೆಯಲ್ಲಿ ತಿಳಿಸಿದರು. ಸಾರ್ವಜನಿಕರು ಹೆಚ್ಚಾಗಿ ಆಗಮಿಸುವ ಪ್ರದೇಶಗಳಲ್ಲಿ ತಾತ್ಕಾಲಿಕ ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಿ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಕ್ರಮವಹಿಸಿರುವ ಬಗ್ಗೆ ಸಭೆಯಲ್ಲಿ ತಿಳಿಸಲಾಯಿತು. ಹಾಗೂ ಕಡ್ಡಾಯವಾಗಿ ಮಾಸ್ಕ್ ಧರಿಸುವ ಸಂಬಂಧ ಫೀಲ್ಡ್ ಮಾರ್ಷಲ್‌ಗಳ ಸಮನ್ವಯದೊಂದಿಗೆ ಜನಜಾಗೃತಿ ಮೂಡಿಸಲಾಗುತ್ತಿದೆ ಹಾಗೂ ಮಾಸ್ಕ್ ಧರಿಸದೇ ಸಾರ್ವಜನಿಕವಾಗಿ ಓಡಾಡುವವರಿಗೆ ರೂ.250.00 ಗಳನ್ನು ದಂಢ ವಿಧಿಸಿ ಕ್ರಮ ಜರುಗಿಸಲಾಗುತ್ತಿರುತ್ತದೆ ಎಂದು ಸಭೆಯಲ್ಲಿ ವಿವರಿಸಿದರು.

**3. ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರು ಹಾಗೂ ಒಳಚರಂಡಿ ಸಂಬಂಧಿಸಿದ ವಿಷಯಗಳ ಬಗ್ಗೆ.**

ಶ್ರೀ. ಲಕ್ಷ್ಮಿ ವೆಂಕಟೇಶ್ ವಾರ್ಡ್ ಸದಸ್ಯರು ರವರು ಮುನಿಕೊಂಡಪ್ಪ ಬಡಾವಣೆಯಲ್ಲಿ ಕಾವೇರಿ ಕುಡಿಯುವ ನೀರು ಸಮರ್ಪಕವಾಗಿ ಸರಬರಾಜು ಮಾಡುತ್ತಿರುವುದಿಲ್ಲವೆಂದು ಹಾಗೂ ಸದರಿ ಬಡಾವಣೆಯಲ್ಲಿ ಹೊಸದಾಗಿ ಕೊಳವೆ ಬಾವಿ ಕೊರೆಸಿ, ನೀರು ಸರಬರಾಜು ಮಾಡಬೇಕೆಂದು ಸಭೆಯಲ್ಲಿ ಪ್ರಸ್ತಾಪಿಸಿದರು. ಸದರಿ ವಿಷಯದ ಸಂಬಂಧ ನೋಡೆಲ್ ಅಧಿಕಾರಿಗಳು ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯವರಿಗೆ ಹಾಗೂ ವಾರ್ಡ್ ಅಭಿಯಂತರರಿಗೆ ಕ್ರಮ ಕೈಗೊಳ್ಳಲು ಸಭೆಯಲ್ಲಿ ತಿಳಿಸಿದರು.

4. **ವಾರ್ಡ್‌ನಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಬಗ್ಗೆ.**

ವಾರ್ಡ್ ಸದಸ್ಯರುಗಳು ಬಾಗಲಗುಂಟೆ ವ್ಯಾಪ್ತಿಯ ಭುವನೇಶ್ವರಿನಗರದ 8ನೇ ಮುಖ್ಯರಸ್ತೆಯ ಮೋರಿಯಲ್ಲಿ ಸಾರ್ವಜನಿಕರು ಕಸ ಹಾಕುತ್ತಿರುವುದಾಗಿ ತಿಳಿಸಿದರು ಹಾಗೂ ಸುಬ್ರಮಣ್ಯ ದೇವಸ್ಥಾನದ ಆವರಣದಲ್ಲಿ ಗಿಡಗೆಂಟೆಗಳು ಹೆಚ್ಚಾಗಿ ಬೆಳೆದಿರುವ ಕಾರಣ ಸದರಿ ಜಾಗದ ಮಾಲೀಕರಿಗೆ ರೆವಿನ್ಯೂ ಇಲಾಖೆಯಿಂದ ನೋಟೀಸ್ ನೀಡಿ ದೇವಸ್ಥಾನದ ಆವರಣದಲ್ಲಿ ಬೆಳೆದಿರುವ ಗಿಡಗೆಂಟೆಗಳನ್ನು ತೆಗೆಯಲು ಕ್ರಮ ಜರುಗಿಸಲು ತಿಳಿಸಿದರು. ಸದರಿ ವಿಷಯದ ಸಂಬಂಧ ನೋಡೆಲ್ ಅಧಿಕಾರಿಗಳು ವಾರ್ಡ್ ಕಾರ್ಯದರ್ಶಿಗಳಿಗೆ, ಸಹಾಯಕ ಕಂದಾಯ ಅಧಿಕಾರಿಗಳಿಗೆ ಸದರಿ ವಿಷಯದ ಬಗ್ಗೆ ಪತ್ರ ಬರೆದು ಕ್ರಮ ಜರುಗಿಸುವಂತೆ ತಿಳಿಸಿದರು. ಹಾಗೂ ಭುವನೇಶ್ವರಿನಗರದಲ್ಲಿ ಪೌರಕಾರ್ಮಿಕರು ಸರಿಯಾಗಿ ಕರ್ತವ್ಯವನ್ನು ನಿರ್ವಹಿಸದಿರುವ ಬಗ್ಗೆ ಪರಿವೀಕ್ಷಣೆ ನಡೆಸಲು ಹಿರಿಯ ಆರೋಗ್ಯ ಅಧಿಕಾರಿಗಳಿಗೆ ಸೂಚಿಸಿದರು.

ಶ್ರೀ.ಮೂಡಲಗಿರಿಯಪ್ಪ ವಾರ್ಡ್ ಸದಸ್ಯರು ರವರು ಸೌಂದರ್ಯ ಬಡಾವಣೆಯ ಖಾಲಿ ನಿವೇಶನಗಳಲ್ಲಿ ಸಾರ್ವಜನಿಕರು ಕಸ ಹಾಕುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು. ಸದರಿ ವಿಷಯದ ಬಗ್ಗೆ ನೋಡೆಲ್ ಅಧಿಕಾರಿಗಳು ಆರೋಗ್ಯ ಪರಿವೀಕ್ಷಕರಿಗೆ ಕ್ರಮವಹಿಸಲು ಸೂಚಿಸಿದರು. ಮುಂದುವರೆದು ಗುರುಪ್ರಸಾದ್, ವಲಯಾಧ್ಯಕ್ಷರು, ಲಯನ್ ಸಂಸ್ಥೆ ರವರು ಅನಧೀಕೃತವಾಗಿ ಸಾರ್ವಜನಿಕರು ರಸ್ತೆಯ ಬದಿಗಳಲ್ಲಿ ಹಾಕುತ್ತಿರುವ ಕಸದ ಸ್ಥಳಗಳನ್ನು ಗುರುತಿಸಿ ಆಯಾ ಸ್ಥಳಗಳಲ್ಲಿ ಸಿ.ಸಿ ಕ್ಯಾಮೆರಾ ಅಳವಡಿಸಿ ಕ್ರಮ ಜರುಗಿಸಲು ಸೂಚಿಸಿದರು. ಸದರಿ ವಿಷಯದ ಸಂಬಂಧ ನೋಡೆಲ್ ಅಧಿಕಾರಿಗಳು 24 ಸಂಖ್ಯೆಯ ಸಿ.ಸಿ ಕ್ಯಾಮೆರಾಗಳನ್ನು ಅಳವಡಿಸಲು ಅನುದಾನ ಕೋರಿ ಸಕ್ಷಮ ಪ್ರಾಧಿಕಾರಿಗಳಿಗೆ ಪತ್ರ ಬರೆದು ಕ್ರಮ ಜರುಗಿಸಲು ವಾರ್ಡ್ ಅಭಿಯಂತರರಿಗೆ ಸೂಚಿಸಿದರು.

**5.ವಾರ್ಡ್ ವ್ಯಾಪ್ತಿಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳ ಹಾಗೂ ರಸ್ತೆಗುಂಡಿ ಮುಚ್ಚುವ ಬಗ್ಗೆ.**

ಬಾಗಲಗುಂಟೆ ವಾರ್ಡ್ ನಂ.14ರ ಕಿರ್ಲೋಸ್ಕರ್ ಬಡಾವಣೆ, ಸಿದ್ದೇಶ್ವರ ಮುಖ್ಯರಸ್ತೆಗಳಲ್ಲಿ ಡಾಂಬರೀಕರಣ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತದೆ ಮತ್ತು ಬಾಗಲಗುಂಟೆ ವಾರ್ಡ್‌ನ ಎಂ.ಎಸ್.ರಾಮಯ್ಯ ಬಡಾವಣೆ, ಹಾವನೂರು ಬಡಾವಣೆಗಳಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚಿರುವುದಾಗಿ ಹಾಗೂ ಉಳಿಕೆ ಬಡಾವಣೆಗಳಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚಲಾಗುವುದೆಂದು ಸಭೆಯಲ್ಲಿ ವಾರ್ಡ್ ಅಭಿಯಂತರರು ತಿಳಿಸಿದರು.

**6.ವಾರ್ಡ್ ವ್ಯಾಪ್ತಿಯಲ್ಲಿ ವಾಹನಗಳ ಸುಗಮ ಸಂಚಾರ ಮತ್ತು ವಾಹನ ನಿಲುಗಡೆಯ ಬಗ್ಗೆ.**

ಶ್ರೀ.ವಿ.ರಾಮೇಗೌಡ, ಭುವನೇಶ್ವರಿನಗರದ ಹಿತರಕ್ಷಣಾ ಸಮಿರಿ ರವರು ಸಭೆಯಲ್ಲಿ ಮಾತನಾಡಿ ಭುವನೇಶ್ವರಿನಗರದ ಎಸ್.ಬಿ.ಐ ಬ್ಯಾಂಕ್ ಶಾಖೆಯ ಹತ್ತಿರ ವಾಹನ ನಿಲುಗಡೆಯಿಂದಾಗಿ ತೊಂದರೆಯಾಗುತ್ತಿರುವುದಾಗಿ ಮತ್ತು ಪೈಪ್‌ಲೈನ್ ರಸ್ತೆಯ ಉದ್ಯಾನವನದ ಇಕ್ಕೆಲಗಳಲ್ಲಿ ದ್ವಿಮುಖ ವಾಹನ ಸಂಚಾರವಿದ್ದು, ಇದರಿಂದಾಗಿ ಸಂಚಾರ ದಟ್ಟಣೆ ಉಂಟಾಗುತ್ತಿರುವುದಾಗಿ ತಿಳಿಸಿದರು. ಈ ಬಗ್ಗೆ ಪರಿಶೀಲಿಸಲು ಮತ್ತು ಸಂಬಂಧಪಟ್ಟ ಸಂಚಾರಠಾಣೆಯ ಆರಕ್ಷಕರಿಗೆ ಈ ಕುರಿತು ಮಾಹಿತಿ ನೀಡಲು ಸಹಾಯಕ ಅಭಿಯಂತರರಿಗೆ ನೋಡೆಲ್ ಅಧಿಕಾರಿಗಳು ತಿಳಿಸಿದರು.

Scanned with CamScanner

ಅಂತಿಮವಾಗಿ ನೋಡೆಲ್ ಅಧಿಕಾರಿ ಮಾತನಾಡಿ, ಸಕಾಲದಲ್ಲಿ ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ಸ್ಪಂದಿಸಿ ಬಗೆಹರಿಸಲು ಎಲ್ಲಾ ಇಲಾಖೆಗಳ ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ನೋಡೆಲ್ ಅಧಿಕಾರಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

9/12/2020

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ. 14, ಬಾಗಲಗುಂಟೆ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ನೋಡೆಲ್ ಅಧಿಕಾರಿ ಹಾಗೂ
ವಾರ್ಡ್ ಸಮಿತಿ ಅಧ್ಯಕ್ಷರು
ಮತ್ತು ಕಾರ್ಯಪಾಲಕ ಅಭಿಯಂತರರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

<u>ಅಧಿಕಾರಿಗಳ ಮಾಹಿತಿಗಾಗಿ</u>

1) ಮಾನ್ಯ ವಿಶೇಷ ಆಯುಕ್ತರು, ಬಿಬಿಎಂಪಿ, ಬೆಂಗಳೂರು ರವರ ಅವಗಾಹನೆಗಾಗಿ ಮಂಡಿಸಿದೆ.
2) ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
3) ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯರವರ ಅವಗಾಹನೆಗಾಗಿ ಮಂಡಿಸಿದೆ.
4) ಉಪ ನಿಯಂತ್ರಕರು (ಹಣಕಾಸು) ದಾ.ವ ರವರ ಮಾಹಿತಿಗಾಗಿ ಕಳುಹಿಸಿದೆ.
5) ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಾರ್ಯಪಾಲಕ ಅಭಿಯಂತರರು (ಟಿ.ದಾ.ಉ.ವಿ) ರವರ ಮಾಹಿತಿಗಾಗಿ ಕಳುಹಿಸಿದೆ
7) ಸಹಾಯಕ ಕಂದಾಯ ಅಧಿಕಾರಿ (ದಾ.ಉ.ವಿ) ಬಿಬಿಎಂಪಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಿದೆ.
8) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಸಲ್ಲಿಸಿದೆ
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಸಲ್ಲಿಸಿದೆ.
10) ಕಛೇರಿ ಪ್ರತಿ.

Scanned with CamScanner